**ಕರ್ನಾಟಕ ಸರ್ಕಾರ**

ಸಂಖ್ಯೆ: ಎನರ್ಜಿ ವಿಎಸ್‌ಸಿ 134/2023

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ,
ಬೆಂಗಳೂರು, ದಿನಾಂಕ:27-06-2023

**ಸುತ್ತೋಲೆ**

ವಿಷಯ: ಮುಂಗಾರು ಆಕಸ್ಮಿಕ ಯೋಜನೆ (Monsoon Contingency Plan) ಯನ್ನು ಕೆಪಿಟಿಸಿಎಲ್ ಮತ್ತು ವಿದ್ಯುತ್ ಸರಬರಾಜು ಕಂಪನಿಗಳಲ್ಲಿ ಜಾರಿಗೆ ತರುವ ಬಗ್ಗೆ.

*****

ರಾಜ್ಯದಲ್ಲಿ ಮುಂಗಾರು ಋತುಮಾನವು ಪ್ರಾರಂಭವಾಗಿದ್ದು, ವಿದ್ಯುತ್ ಸರಬರಾಜಿನಲ್ಲಿ ಮತ್ತು ವಿದ್ಯುತ್ ಜಾಲದ ನಿರ್ವಹಣೆಯಲ್ಲಿ ಉಂಟಾಗಬಹುದಾದ ವ್ಯತಿರಿಕ್ತ ಪರಿಣಾಮಗಳನ್ನು ಸಮರ್ಥವಾಗಿ ನಿಭಾಯಿಸಲು ಮತ್ತು ಎಲ್ಲಾ ರೀತಿಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕಾದ ಅವಶ್ಯಕತೆಯಿರುವುದರಿಂದ ಕೆಪಿಟಿಸಿಎಲ್ / ವಿದ್ಯುತ್ ಸರಬರಾಜು ಕಂಪನಿಗಳು ಈ ಕೆಳಕಂಡ ಕ್ರಮಗಳನ್ನು ಕೂಡಲೇ ಕೈಗೊಳ್ಳಲು ಸೂಚಿಸಲಾಗಿದೆ.

1. ಕೆ.ಪಿ.ಸಿ.ಎಲ್ ನಿಗಮವು ನಿರಂತರ ವಿದ್ಯುತ್ ಉತ್ಪಾದನೆಗೆ ಅಗತ್ಯವಿರುವ, ಉತ್ಪಾದನಾ ಘಟಕಗಳ ನಿರ್ವಹಣಾ ಕ್ರಮಗಳನ್ನು ಸೂಕ್ತವಾಗಿ ನಿರ್ವಹಿಸುವುದು.
2. ಕೆ.ಪಿ.ಟಿ.ಸಿ.ಎಲ್ ಮತ್ತು ಎಲ್ಲಾ ವಿದ್ಯುತ್ ಸರಬರಾಜು ಕಂಪನಿಗಳು ವಿದ್ಯುತ್ ಜಾಲದ ಪೂರ್ವ-ಮುಂಗಾರು ನಿರ್ವಹಣೆಯನ್ನು ಆದ್ಯತೆ ಮೇಲೆ ಹಾಗೂ ಪರಿಣಾಮಕಾರಿಯಾಗಿ ಕೈಗೊಳ್ಳುವುದು.
3. ವ್ಯವಸ್ಥಾಪಕ ನಿರ್ದೇಶಕರು, ನಿರ್ದೇಶಕರು (ಪ್ರಸರಣ)/(ತಾಂತ್ರಿಕ) ಮತ್ತು ಎಲ್ಲಾ ಸಂಬಂಧಿತ ಅಧಿಕಾರಿಗಳು ಮುಂಗಾರು ಸಮಯದಲ್ಲಿ ವಿದ್ಯುತ್ ಜಾಲವನ್ನು ಸುಸ್ಥಿತಿಯಲ್ಲಿರುವುದನ್ನು ಖಾತರಿಪಡಿಕೊಳ್ಳಲು ಎಲ್ಲಾ ಹಂತಗಳಲ್ಲಿ ಪರಿಣಾಮಕಾರಿಯಾಗಿ ಸಂವಹನ ಸಾಧಿಸಿ, ತುರ್ತಾಗಿ ಕಾರ್ಯವನ್ನು ಪೂರ್ಣಗೊಳಿಸುವುದು.
4. ಕೆ.ಪಿ.ಟಿ.ಸಿ.ಎಲ್ ಮತ್ತು ವಿದ್ಯುತ್ ಸರಬರಾಜು ಕಂಪನಿಗಳು ಮುಂಗಾರು ಸೂಕ್ಷ್ಮ ಪ್ರದೇಶಗಳು, ಸೂಕ್ಷ್ಮ ಸ್ಥಾವರಗಳು ಮತ್ತು ಪ್ರಸರಣ ಮಾರ್ಗಗಳು ಇತ್ಯಾದಿಗಳನ್ನು ಆದ್ಯತೆ ಮೇಲೆ ಗುರುತಿಸಿ, ಪರಿಹಾರ ಕ್ರಮಗಳನ್ನು ಕೈಗೊಳ್ಳುವುದು.
5. ವಿತರಣಾ ಜಾಲದ ನಿರ್ವಹಣೆಗೆ ಬೇಕಾಗುವ ಅಗತ್ಯ ಸಾಮಗ್ರಿಗಳಾದ ವಿದ್ಯುತ್ ಕಂಬಗಳು, ಪರಿವರ್ತಕಗಳು, ವಾಹಕಗಳು, Insulators ಹಾಗೂ ಇತರೆ ಸಾಮಗ್ರಿಗಳನ್ನು ಸಾಕಷ್ಟು ಸಂಖ್ಯೆಯಲ್ಲಿ ಉಗ್ರಾಣದಲ್ಲಿ ದಾಸ್ತಾನು ಇಟ್ಟುಕೊಳ್ಳುವುದು. ಎಲ್ಲಾ ವಿಫಲಗೊಂಡ ಪರಿವರ್ತಕಗಳನ್ನು ಆದ್ಯತೆ ಮೇಲೆ ದುರಸ್ತಿ ಕೇಂದ್ರಕ್ಕೆ ಕಳುಹಿಸಿ, ದುರಸ್ತಿಗೊಳಿಸಿ, ಸಾಕಷ್ಟು ಸಂಖ್ಯೆಯಲ್ಲಿ ದಾಸ್ತಾನು ಇಟ್ಟುಕೊಳ್ಳುವುದು.
6. ಪ್ರತಿ ಉಪವಿಭಾಗದ ಸೇವಾ ಕೇಂದ್ರದಲ್ಲಿ ಸಿಬ್ಬಂದಿಗಳ ನಿಯೋಜನೆ, ವಾಹನ ಸೌಕರ್ಯ, ತುರ್ತು ನಿರ್ವಹಣೆಗೆ ಬೇಕಾದ Hand Torch, Fuse wire, Insulation Tape, Ladder, Rope ಮುಂತಾದ ಅಗತ್ಯ ಸಲಕರಣೆಗಳು ಇರುವಂತೆ ಖಾತ್ರಿ ಪಡಿಸಿಕೊಂಡು ಸೇವಾ ಕೇಂದ್ರಗಳನ್ನು ಸಜ್ಜುಗೊಳಿಸುವುದು.
7. ಶಾಖಾ ಮಟ್ಟದ ಕಛೇರಿಯಿಂದ ವಿಭಾಗ ಮಟ್ಟದ ಕಛೇರಿವರೆಗಿನ ಅಧಿಕಾರಿಗಳು ಮುಂಗಾರಿನ ಅವಧಿಯಲ್ಲಿ ಕೇಂದ್ರ ಸ್ಥಾನದಲ್ಲಿ ಇದ್ದುಕೊಂಡು ಉಸ್ತುವಾರಿ ಹಾಗೂ ಮೇಲ್ವಿಚಾರಣೆಯನ್ನು ನಡೆಸುವುದು ಅತಿ ಮುಖ್ಯವಾಗಿರುತ್ತದೆ. ಎಲ್ಲಾ ಸಂಬಂಧಪಟ್ಟ ಅಧಿಕಾರಿಗಳು ಸ್ಥಿರ ದೂರವಾಣಿ, ಮೊಬೈಲ್ ಫೋನ್ ಗಳನ್ನು ಸದಾ ಚಾಲನೆಯಲ್ಲಿಟ್ಟುಕೊಂಡು ಸಾರ್ವಜನಿಕರ ದೂರುಗಳಿಗೆ ಸ್ಪಂದಿಸುವುದು.
8. Rain coat, Rubber Hand gloves, Helmet, Safety Belt, Ladder ಇತ್ಯಾದಿ ಸುರಕ್ಷತಾ ಸಲಕರಣೆಗಳನ್ನು ಕಡ್ಡಾಯವಾಗಿ ಉಪಯೋಗಿಸುವಂತೆ ಸಿಬ್ಬಂದಿಗಳಿಗೆ ಸೂಚಿಸುವುದು.

9. ಮುಂಗಾರು ಆಕಸ್ಮಿಕದ ಅವಗಢಗಳ ತೀವ್ರತೆಯನ್ನಾಧರಿಸಿ ಮೇಲಾಧಿಕಾರಿಗಳಿಗೆ ಕೂಡಲೇ ವರದಿ ಮಾಡುವುದು.
10. ಮುಂಗಾರು ಆಕಸ್ಮಿಕ ಯೋಜನೆಯಡಿ ತಾತ್ಕಾಲಿಕ ಗ್ಯಾಂಗ್ ಮ್ಯಾನ್ ಗಳ ಅವಶ್ಯಕತೆ ಕಂಡುಬಂದಲ್ಲಿ, ನಿಯೋಜನೆಗೆ ಕ್ರಮ ಕೈಗೊಳ್ಳುವುದು.
11. ವಿದ್ಯುತ್ ಸಂಬಂಧಿತ ದೂರುಗಳನ್ನು ದಾಖಲಿಸಲು ಸಾರ್ವಜನಿಕರಿಗೆ ಅನುಕೂಲವಾಗುವಂತೆ ಸೇವಾ ಕೇಂದ್ರಗಳ ದೂರವಾಣಿ ಸಂಖ್ಯೆ ಮತ್ತು ಮೊಬೈಲ್ ದೂರವಾಣಿ ಸಂಖ್ಯೆಗಳನ್ನು ಸ್ಥಳೀಯ ಪತ್ರಿಕೆಗಳಲ್ಲಿ ಪ್ರಕಟಣೆ ಮೂಲಕ ತಿಳಿಸುವುದು. 1912 ಸಹಾಯವಾಣಿಯನ್ನು ಎಲ್ಲಾ ಸಮಯದಲ್ಲಿಯೂ ಚಾಲನೆಯಲ್ಲಿಡುವುದು
12. ವಿದ್ಯುತ್ ಅಪಘಾತಗಳನ್ನು ತಡೆಗಟ್ಟಲು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು.
13. ಅಪಾಯಕಾರಿ ಸ್ಥಾವರಗಳನ್ನು ಗುರುತಿಸಿ, ಸರಿಪಡಿಸಲು ಕ್ರಮ ವಹಿಸುವುದು. ಮುಂಗಾರು ಸಮಯದಲ್ಲಿ ವಿದ್ಯುತ್ ಮಾರ್ಗಗಳಿಂದ ಅಪಘಾತಗಳು ಜರುಗುವ ಸನ್ನಿವೇಶಗಳ ಬಗ್ಗೆ ಹಾಗೂ ಅಪಘಾತಗಳನ್ನು ತಡೆಗಟ್ಟುವ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು.
14. ಆಸ್ಪತ್ರೆಗಳು, ಆಮ್ಲಜನಕ ಘಟಕಗಳು, ಮತ್ತು ಕುಡಿಯುವ ನೀರಿನ ಸ್ಥಾವರಗಳಿಗೆ ಸಮರ್ಪಕ ವಿದ್ಯುತ್ ಪೂರೈಕೆ ಮಾಡಲು ಕ್ರಮ ವಹಿಸಿ, ವಿದ್ಯುತ್ ಪೂರೈಕೆಯ ಕುರಿತು ದಿನವಹಿ ಮೇಲ್ವಿಚಾರಣೆ ನಡೆಸಿ, ವಿದ್ಯುತ್ ಅಡಚಣೆಯನ್ನು ತಪ್ಪಿಸಲು ಎಲ್ಲಾ ರೀತಿಯ ಸಿದ್ಧತಾ ಕ್ರಮಗಳನ್ನು ಕೈಗೊಳ್ಳುವುದು.
15. Radial Source ಮಾತ್ರ ಲಭ್ಯವಿರುವ ಉಪಕೇಂದ್ರಗಳಿಂದ ಹೊರ ಹೋಗುವ 11ಕೆ.ವಿ ವಿದ್ಯುತ್ ಮಾರ್ಗಗಳಡಿ ಆಸ್ಪತ್ರೆಗಳು, ಮುಂತಾದ ಸೂಕ್ಷ್ಮ ಸ್ಥಾವರಗಳನ್ನು ಗುರುತಿಸಿ, ವಿದ್ಯುತ್ ಅಡಚಣೆ ಉಂಟಾದಲ್ಲಿ, ಹತ್ತಿರದಲ್ಲಿ ಲಭ್ಯವಿರುವ 11ಕೆ.ವಿ ಮಾರ್ಗಗಳಿಂದ ಪರ್ಯಾಯ ವಿದ್ಯುತ್ ವ್ಯವಸ್ಥೆಯನ್ನು ಕಲ್ಪಿಸಲು ವಿದ್ಯುತ್ ಸರಬರಾಜು ಕಂಪನಿಗಳು ಕ್ರಮ ವಹಿಸುವುದು.
16. ಒಂದು ವೇಳೆ ಇತರೆ ವಿದ್ಯುತ್ ಸರಬರಾಜು ಕಂಪನಿಗಳಿಂದ ಸಿಬ್ಬಂದಿಗಳನ್ನು ನಿಯೋಜಿಸಿದಲ್ಲಿ, ಅವರಿಗೆ ಸೂಕ್ತವಾದ ತಂಗುವ ಮತ್ತು ಇತರೆ ವ್ಯವಸ್ಥೆಯನ್ನು ಮಾಡುವುದರೊಂದಿಗೆ ಅವರಿಂದ ಕಾರ್ಯವನ್ನು ಯೋಜಿತ ರೀತಿಯಲ್ಲಿ ಕೈಗೊಳ್ಳುವುದು.

(ವಿನೋದ್ ಕುಮಾರ್ ಡಿ.ಎಂ.)
ಸರ್ಕಾರದ ಅಧೀನ ಕಾರ್ಯದರ್ಶಿ
ಇಂಧನ ಇಲಾಖೆ

ಇವರಿಗೆ:

1) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ಬೆಂಗಳೂರು
2) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಬೆಂಗಳೂರು.
3) ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ, ಬೆಂಗಳೂರು.
4) ವ್ಯವಸ್ಥಾಪಕ ನಿರ್ದೇಶಕರು, ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ, ಮೈಸೂರು.
5) ವ್ಯವಸ್ಥಾಪಕ ನಿರ್ದೇಶಕರು, ಮಂಗಳೂರು ವಿದ್ಯುತ್ ಸರಬರಾಜು ಕಂಪನಿ, ಮಂಗಳೂರು.
6) ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ, ಹುಬ್ಬಳ್ಳಿ.
7) ವ್ಯವಸ್ಥಾಪಕ ನಿರ್ದೇಶಕರು, ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ, ಕಲಬುರ್ಗಿ.
8) ವ್ಯವಸ್ಥಾಪಕ ನಿರ್ದೇಶಕರು, ಹುಕ್ಕೇರಿ ಗ್ರಾಮೀಣ ವಿದ್ಯುತ್ ಸಹಕಾರಿ ಸಂಘ, ಹುಕ್ಕೇರಿ.

## ಮೆಮೋ

**ಸಂಖ್ಯೆ: ಚಾವಿಸನಿನಿ/ಪ್ರವ್ಯ(ತಾ)/ಉಪ್ರವ್ಯ/ಸಪ್ರವ್ಯ(ಸಿಸಿ)/23-24/** cys-459 **ದಿನಾಂಕ:** 05 JUL 2023

ಸರ್ಕಾರದ ಅಧೀನ ಕಾರ್ಯದರ್ಶಿಗಳು, ಇಂಧನ ಇಲಾಖೆ ರವರು ಹೊರಡಿಸಿರುವ ಸುತ್ತೋಲೆ ಸಂಖ್ಯೆ: ಎನರ್ಜಿ ವಿಎಸ್‌ಸಿ 134/2023 ದಿನಾಂಕ: 27-06-2023 ಮಾಹಿತಿಗಾಗಿ ಮತ್ತು ಸೂಕ್ತ ಕ್ರಮಕ್ಕಾಗಿ.

**ಪ್ರತಿಗಳು:**

1. ಮುಖ್ಯ ಇಂಜಿನಿಯರ್ (ವಿ), ಕಾರ್ಯ ಮತ್ತು ಪಾಲನಾ ವಲಯ, ಚಾವಿಸನಿನಿ, ಮೈಸೂರು/ಹಾಸನ.
2. ಪ್ರಧಾನ ವ್ಯವಸ್ಥಾಪಕರು (ತಾಂತ್ರಿಕ)/(ಆ ಮತ್ತು ಮಾ.ಸಂ)/ವಾಣಿಜ್ಯ/ಖರೀದಿ/(ಲೆ & ಸಂ)/, ನಿಗಮ ಕಛೇರಿ, ಚಾವಿಸನಿನಿ, ಮೈಸೂರು.
3. ಎಲ್ಲಾ ಅಧೀಕ್ಷಕ ಇಂಜಿನಿಯರ್(ವಿ)ಗಳು, ಕಾರ್ಯ ಮತ್ತು ಪಾಲನಾ ವೃತ್ತ ಮೈಸೂರು-ಚಾಮರಾಜನಗರ, ಮಂಡ್ಯ, ಹಾಸನ ಮತ್ತು, ಹುಣಸೂರು-ಕೊಡಗು ಚಾವಿಸನಿನಿ.
4. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ)ಗಳು, ಕಾರ್ಯ ಮತ್ತು ಪಾಲನಾ ವಿಭಾಗ, ಚಾವಿಸನಿನಿ.
5. ಎಲ್ಲಾ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್(ವಿ)ಗಳು, ಉಪವಿಭಾಗ, ಚಾವಿಸನಿನಿ.
6. ಕಾರ್ಯನಿರ್ವಾಹಕ ಸಹಾಯಕರು, ವ್ಯವಸ್ಥಾಪಕ ನಿರ್ದೇಶಕರು, ನಿಗಮ ಕಛೇರಿ, ಚಾವಿಸನಿನಿ, ಮೈಸೂರು.
7. ಉಪ ಪ್ರಧಾನ ವ್ಯವಸ್ಥಾಪಕರು, ಎಂಐಎಸ್, ನಿಗಮ ಕಛೇರಿ, ಚಾವಿಸನಿನಿ, ಮೈಸೂರು ರವರ ಮಾಹಿತಿಗಾಗಿ ಮತ್ತು ನಿಗಮದ ಜಾಲತಾಣದಲ್ಲಿ ಪ್ರಕಟಿಸಲು.
8. ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ (ವಿ) ಡಿ.ಸಿ.ಸಿ/ ಸಿಸಿಸಿಡಿ, ಚಾ.ವಿ.ಸ.ನಿ.ನಿ, ಮೈಸೂರು.
9. ಸಹಾಯಕ ಸಾರ್ವಜನಿಕ ಸಂಪರ್ಕ ಅಧಿಕಾರಿಗಳು(APRO), ನಿಗಮ ಕಛೇರಿ, ಚಾವಿಸನಿನಿ, ಮೈಸೂರು.
11. ಎಲ್ಲಾ ಶಾಖಾಧಿಕಾರಿಗಳು, ಕಾ ಮತ್ತು ಪಾ ಶಾಖೆ, ಚಾವಿಸನಿನಿ ರವರ ಸೂಕ್ತ ಕ್ರಮಕ್ಕಾಗಿ.
12. ಆಪ್ತ ಸಹಾಯಕರು ವ್ಯ.ನಿ ಇದನ್ನು ಮಾನ್ಯ ವ್ಯ.ನಿ ರವರ ದಯಾಪರ ಗಮನಕ್ಕೆ ತರಲು ಕೋರಲಾಗಿದೆ.
13. ತಾಂ.ಸ, ನಿ(ತಾಂ) ಇದನ್ನು ಮಾನ್ಯ ವ್ಯ.ನಿ./ನಿ(ತಾಂ) ರವರ ದಯಾಪರ ಗಮನಕ್ಕೆ ತರಲು ಕೋರಲಾಗಿದೆ.

ಕಛೇರಿ ಪ್ರತಿ/ಮುಖ್ಯ ಕಡತ

ಪ್ರಧಾನ ವ್ಯವಸ್ಥಾಪಕರು (ತಾಂತ್ರಿಕ),
ಚಾವಿಸನಿನಿ, ಮೈಸೂರು